ಅ) ಗಂಧದ ಕಳ್ಳಸಾಗಾಣೆದಾರ ವೀರಪ್ಪನ್‌ನನ್ನು ಹಿಡಿಯುವ ಕಾರ್ಯ ಮುಂದುವರೆದಿದ್ದು,ಆತನ ಬಹುತೇಕ ಸಹಚರರನ್ನು ಈಗಾಗಲೇ ಬಂಧಿಸಲಾಗಿದೆ. ಇದುವರೆಗೆ ದೊರೆತಿರುವ ಮಾಹಿತಿ ಆಧಾರದ ಮೇಲೆ ವೀರಪ್ಪನ್ ಗುಂಪಿನಲ್ಲಿ ಪ್ರಸ್ತುತ 9 ಮಂದಿ ಮಾತ್ರ ಇದ್ದಾರೆಂದು ತಿಳಿದುಬಂದಿದೆ.

ಆ) ವೀರಪ್ಪನ್ ಮತ್ತು ಆತನ ಸಹಚರರನ್ನು ಬಂಧಿಸುವ ನಿಟ್ಟಿನಲ್ಲಿ "ಟಾಸ್ಕ್‌ಫೋರ್ಸ್"ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದ್ದು, ಈ ಹಿನ್ನಲೆಯಲ್ಲಿ ಅವರ ಮತ್ತು ಸಹಚರರ ಚಲನ-ವಲನಗಳ ಮೇಲೆ ತೀವ್ರ ನಿಗ ಇಡಲಾಗಿದೆ.

ಇ) ಪೊಲೀಸ್ ಇಲಾಖೆಯಿಂದ ಖರ್ಚಾದ ಹಣ ರೂ.10,77,800-00

ಪೋಲೀಸ್ ಸಿಬ್ಬಂದಿಯ ಬಗ್ಗೆ.

1349 - ಶ್ರೀ. ವಾಟಾಳ್ ನಾಗರಾಜ್(ಚಾಮರಾಜನಗರ), ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಅರಣ್ಯಪ್ರದೇಶ ಹೊಂದಿದ ಗಡಿ ಪ್ರದೇಶ ಆಗಿರುವುದರಿಂದ ಹೆಚ್ಚಿನ ಪೋಲೀಸ್ ಠಾಣೆ, ಅಗ್ನಿಶಾಮಕ ಠಾಣೆಯನ್ನು ನೀಡಲು ಸರ್ಕಾರ ನಿರ್ಧಾರ ಮಾಡಿದೆಯೇ?

ಶ್ರೀ ಧರ್ಮಸಿಂಗ್ (ಗೃಹ ಸಚಿವರು)

ಅ) ಚಾಮರಾಜನಗರದಲ್ಲಿ ಪೋಲೀಸ್ ಠಾಣೆಗಳನ್ನು ಹೆಚ್ಚಿಸುವ ಪ್ರಸ್ತಾವನೆ ಇರುವುದಿಲ್ಲ.

1990-91ನೇ ಆರ್ಥಿಕ ಸಾಲಿನಲ್ಲಿ ಚಾಮರಾಜನಗರದಲ್ಲಿ ಒಂದು ಅಗ್ನಿಶಾಮಕ ಠಾಣೆಯನ್ನು ತೆರೆಯುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಅಂಬೇಡ್ಕರ್ ಭವನ ನಿರ್ಮಾಣದ ಬಗ್ಗೆ.

1367 - ಶ್ರೀ ಪಿ.ಜಿ.ಆರ್. ಸಿಂಧ್ಯ(ಕನಕಪುರ), ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರಿನಲ್ಲಿ ಅಂಬೇಡ್ಕರ್ ಭವನದ ನಿರ್ಮಾಣಕ್ಕಾಗಿ ಹಣ ಖರ್ಚಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು?

ಶ್ರೀ ಬಿ. ಶಿವಣ್ಣ (ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಯು ನಕ್ಷೆ ಮತ್ತು ಅಂದಾಜು ವೆಚ್ಚವನ್ನು 820 ಲಕ್ಷ ರೂ.ಗಳಲ್ಲಿ ತಯಾರಿಸಿರುತ್ತಾರೆ. 1990-91ನೇ ಆರ್ಥಿಕ ಸಾಲಿನಲ್ಲಿ ಕೇವಲ ರೂ.1,72,000 ಒದಗಿಸಲಾಗಿದೆ. ಮುಂಬರುವ ಆರ್ಥಿಕ ಸಾಲುಗಳಲ್ಲಿ ಸಾಕಷ್ ಹಣವನ್ನು ಈ ಭವನದ ನಿರ್ಮಾಣಕ್ಕೆ ಒದಗಿಸಲಾಗುವುದು.

ನೀರಾವರಿ ಬಾವಿಗಳನ್ನು ತೋಡಿಸುವ ಬಗ್ಗೆ.

1368 – ಶ್ರೀ ಪಿ.ಜಿ.ಆರ್. ಸಿಂಧ್ಯ(ಕನಕಪುರ),ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ನೀರಾವಿ ಬಾವಿಗಳನ್ನು ತೋಡಿಸಲಾಗಿದೆ.(ಜಿಲ್ಲಾವಾರು ಅಂಕಿ ಅಂಶಗಳನ್ನು ಕೊಡುವುದು)

ಆ) ಇವುಗಳಲ್ಲಿ ಎಷ್ಟು ಎಕರೆ ಜಮೀನಿಗೆ ನೀರಾವರಿ ಸೌಲಭ್ಯ ಸಿಕ್ಕಿದೆ?